ದೂರವಾಣಿ : 080-2976 2005, 2976 2006
ವೆಬ್‌ಸೈಟ್ : **www.kanakapura.tpa.gov.in**
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

**ಖಾತಾ ನಂ. 469/CA, ಸಹಕಾರಿ ವಸತಿ ಬಡಾವಣೆ, ಅಗ್ರಹಾರ ನ್ಯೂ ಕಾಲೋನಿ, ತುಂಗಣಿ ಅಂಚೆ,**
**ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.**

## ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನೆ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ ಕಲಂ 17(2ಎ)ರಡಿಯಲ್ಲಿ)

**ವಿಷಯ : ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ-2 ಹೋಬಳಿ, ತರಳು ಗ್ರಾಮದ ಸ.ನಂ. 124/3 ರಲ್ಲಿ 1ಎ-26ಗುಂ ವಿಸ್ತೀರ್ಣದ ಜಮೀನನ್ನು ವಸತಿ ಉದ್ದೇಶದ ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಿ ಸಲ್ಲಿಸಿರುವ ಮನವಿ ಕುರಿತು.**

ಉಲ್ಲೇಖ: 1) ಅರ್ಜಿದಾರರ ಮನವಿ ಪತ್ರ ದಿನಾಂಕ : 16.03.2021.
2) ದಿನಾಂಕ: 27.04.2021 ರಂದು ಜರುಗಿದ ಪ್ರಾಧಿಕಾರದ 79ನೇ ಸಭೆಯ ವಿಷಯ ಸಂಖ್ಯೆ: 28ರ ನಿರ್ಣಯ.
3) ಅರ್ಜಿದಾರರು ಪ್ರಾಧಿಕಾರಕ್ಕೆ ಹಣ ಪಾವತಿಸಿರುವ ರಶೀದಿ ನಂ. 366 ದಿನಾಂಕ : 14.07.2021.
4) ನೋಂದಾಯಿತ ಪರಿತ್ಯಾಜನಾ ಪತ್ರ ಸಲ್ಲಿಸಿದ ದಿನಾಂಕ : 27.06.2022.

********

### ಪ್ರಸ್ತಾವನೆ :-

ಅರ್ಜಿದಾರರಾದ **ಶ್ರೀ ಪುನೀತ್ ಆರ್ ಬಿನ್ ಎಲ್.ಇ ರಾಮಮೂರ್ತಿ** ಇವರು ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ-2 ಹೋಬಳಿ, ತರಳು ಗ್ರಾಮದ ಸ.ನಂ. 124/3 ರಲ್ಲಿ 1ಎ-26ಗುಂ ವಿಸ್ತೀರ್ಣದ ಜಮೀನನ್ನು ವಸತಿ ಉದ್ದೇಶದ ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಿ ಉಲ್ಲೇಖ (1) ರಲ್ಲಿ ಮನವಿ ಸಲ್ಲಿಸಿರುತ್ತಾರೆ.

ಪರಿಶೀಲಿಸಲಾಗಿ, ಸರ್ಕಾರದಿಂದ ಅನುಮೋದನೆಯಾಗಿರುವ ಮಹಾಯೋಜನೆ-2031 ರಲ್ಲಿ ಪ್ರಶ್ನಿತ ಜಮೀನನ್ನು **ಉದ್ಯಾನವನ ಮತ್ತು ಬಯಲು ಜಾಗ ವಲಯಕ್ಕಾಗಿ** ಕಾಯ್ದಿರಿಸಲಾಗಿದ್ದು, ಸದರಿ ಜಮೀನನ್ನು ಪ್ರಾಧಿಕಾರದ ಭೂ ಉಪಯೋಗ ಮರುನಿಗಧಿ ಆದೇಶ ಸಂಖ್ಯೆ : ಕಯೋಪ್ರಾ/69(2)/ಭೂಉ/02/2020-21 ದಿನಾಂಕ : 28.10.2020 ರಲ್ಲಿ ಉದ್ಯಾನವನ ಮತ್ತು ಬಯಲುಜಾಗ ವಲಯದಿಂದ ವಸತಿ ವಲಯಕ್ಕೆ ಭೂ ಉಪಯೋಗ ಮರುನಿಗಧಿ ಮಾಡಲಾಗಿರುತ್ತದೆ. ಅದರಂತೆ ಜಿಲ್ಲಾಧಿಕಾರಿಗಳಿಂದ **ವಸತಿ** ಉದ್ದೇಶಕ್ಕೆ ಭೂ ಪರಿವರ್ತನೆಯಾಗಿರುತ್ತದೆ. ಪ್ರಸ್ತಾಪಿತ ಜಮೀನಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಉಲ್ಲೇಖ (2)ರ ಪ್ರಾಧಿಕಾರದ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಅರ್ಜಿದಾರರು ನಿಯಮಾವಳಿಗಳನ್ವಯ ಹಾಗೂ ಸರ್ಕಾರದ ನಿರ್ದೇಶನಗಳನ್ವಯ ವಿನ್ಯಾಸ ನಕ್ಷೆ ಅನುಮೋದನೆಗೆ ಪಾವತಿಸಬೇಕಾದ ನಿಗಧಿತ ಶುಲ್ಕ ರೂ. 4,87,100/- ಗಳನ್ನು ಡಿಡಿ ಮೂಲಕ ಉಲ್ಲೇಖ (3)ರಲ್ಲಿ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ವಿನ್ಯಾಸದಲ್ಲಿ ಮೀಸಲಿರಿಸಿರುವ ನಾಗರೀಕ ಸೌಲಭ್ಯ ನಿವೇಶನವನ್ನು ಪ್ರಾಧಿಕಾರಕ್ಕೆ ಹಾಗೂ ಉದ್ಯಾನವನ ಮತ್ತು ಬಯಲುಜಾಗ, ರಸ್ತೆ ಜಾಗಗಳನ್ನು ತರಳು ಗ್ರಾಮಪಂಚಾಯಿತಿಗೆ ನೋಂದಾಯಿತ ಪರಿತ್ಯಾಜನಾ ಪತ್ರಗಳ ಮುಖಾಂತರ ಹಸ್ತಾಂತರಿಸಿ ಪ್ರತಿಗಳನ್ನು ಉಲ್ಲೇಖ (4)ರಲ್ಲಿ ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ.

ಆದೇಶ ಸಂಖ್ಯೆ: ಕಯೋಪ್ರಾ/ಎಲ್‌ಎಓ/127/2020-21/791 ದಿನಾಂಕ : 28 JUN 2022

**ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ-2 ಹೋಬಳಿ, ತರಳು ಗ್ರಾಮದ ಸ.ನಂ. 124/3** ರಲ್ಲಿ **1ಎ-26ಗುಂ** ವಿಸ್ತೀರ್ಣದ ಜಮೀನಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015ರ ಕಲಂ 17(2ಎ) ರನ್ವಯ ವಿನ್ಯಾಸ ನಕ್ಷೆಯನ್ನು ಭೌತಿಕವಾಗಿ ಜಮೀನಿನ ಮೇಲೆ ಅಳವಡಿಸಿ ಅಭಿವೃದ್ಧಿಪಡಿಸಲು ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡಿಸಿ, ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

1. ಈಗ ನೀಡಿರುವ ವಿನ್ಯಾಸ ನಕ್ಷೆಯ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನಾಂಕದಿಂದ ಎರಡು (02) ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮತಿಯನ್ನು ಕನಿಷ್ಠ ಮೂರು (03) ತಿಂಗಳು ಮೊದಲೇ ನವೀಕರಿಸಿಕೊಳ್ಳತಕ್ಕದ್ದು.
2. ಈಗ ನೀಡಿರುವ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯು ತಾತ್ಕಾಲಿಕವಾಗಿದ್ದು, ವಿನ್ಯಾಸವನ್ನು ಸ್ಥಳದಲ್ಲಿ ಯಥಾವತ್ತಾಗಿ ಅಳವಡಿಸಿ, ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವ ಸಲುವಾಗಿ ಮಾತ್ರ ನೀಡಲಾಗಿರುತ್ತದೆ.
3. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು ಹಾಗೂ ಅನುಮೋದನೆ ನೀಡಲಾದ ಉದ್ದೇಶದ ಬಳಕೆಗೆ ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.
4. ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆಯಂತೆ ಬಡಾವಣೆಯ ಎಲ್ಲಾ ಕಾಮಗಾರಿಯ್ನನು ಪೂರ್ಣಗೊಳಿಸಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಗಳಿಂದ ಮುಕ್ತಾಯ ಪ್ರಮಾಣ ಪತ್ರಗಳನ್ನು ಸಲ್ಲಿಸಿದ ನಂತರ ವಿನ್ಯಾಸ ನಕ್ಷೆಗೆ ಸರ್ಕಾರದ ಅಧಿಸೂಚನೆಯಂತೆ ಅಂತಿಮ ಅನುಮೋದನೆ ನೀಡಿ, ಶೇ. 100ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲು ಕ್ರಮ ಜರುಗಿಸಲಾಗುವುದು.
5. ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಶಾಇ/26/ಶಾಸನ/2021 ದಿನಾಂಕ : 05.07.2021 ರಲ್ಲಿ ತಿಳಿಸಿರುವಂತೆ ಅರ್ಜಿದಾರರು ಇಚ್ಛಿಸಿದಲ್ಲಿ ಪ್ರಶ್ನಿತ ಬಡಾವಣೆ ಅಭಿವೃದ್ಧಿಪಡಿಸುತ್ತಿರುವ ಕುರಿತು ರೇರಾ (ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ) ಸಂಸ್ಥೆಯಲ್ಲಿ ನೋಂದಾಯಿಸಿದ ನಂತರ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ಮೀಸಲಿರಿಸಿರುವ ಮೂಲೆ ನಿವೇಶನಗಳನ್ನು ಪ್ರಾಧಿಕಾರಕ್ಕೆ ನೋಂದಾಯಿತ ಅಡಮಾನ ಒಪ್ಪಂದದ ಮೂಲಕ ಹಸ್ತಾಂತರಿಸಿಕೊಳ್ಳುವುದರ ಜೊತೆಗೆ ವಿನ್ಯಾಸದಲ್ಲಿನ ಉದ್ಯಾನವನ ಮತ್ತು ಬಯಲುಜಾಗ ಹಾಗೂ ರಸ್ತೆ ಜಾಗಗಳನ್ನು ಸ್ಥಳೀಯ ಸಂಸ್ಥೆಗೆ ಮತ್ತು ನಾಗರೀಕ ಸೌಲಭ್ಯ ನಿವೇಶನವನ್ನು ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ಹಸ್ತಾಂತರಿಸಿಕೊಂಡು ಚದುರಿದಂತೆ ಶೇ. 40 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆಗೊಳಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.
6. ವಿನ್ಯಾಸದಲ್ಲಿನ ಅಭಿವೃದ್ಧಿ ಕಾರ್ಯ ಕೈಗೊಳ್ಳುವ ಮುನ್ನ ರೇರಾ (ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ) ಪ್ರಾಧಿಕಾರದಲ್ಲಿ ನೋಂದಣಿ ಮಾಡಿಸುವುದು ಕಡ್ಡಾಯವಾಗಿರುತ್ತದೆ.
7. ಈ ಅನುಮೋದನೆಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ತಿದ್ದುಪಡಿ ಕಾಯ್ದೆ 2015 ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸುವ ಸಲುವಾಗಿ ಉಪಯೋಗಿಸಲು ಬರುವುದಿಲ್ಲ ಹಾಗೂ ಈ ಜಮೀನುಗಳಿಗೆ ಸಂಬಂಧಿಸಿದ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ.

ದೂರವಾಣಿ : 080-2976 2005, 2976 2006
ವೆಬ್‌ಸೈಟ್ : www.kanakapura.tpa.gov.in
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

ಖಾತಾ ನಂ. 469/CA, ಸಹಕಾರಿ ವಸತಿ ಬಡಾವಣೆ, ಅಗ್ರಹಾರ ನ್ಯೂ ಕಾಲೋನಿ, ತುಂಗಣಿ ಅಂಚೆ,
ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ.

8. ಸದರಿ ಬಡಾವಣೆಯನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ಪಡೆಯುವ ಸಂದರ್ಭದಲ್ಲಿ ಸದರಿ ವಿನ್ಯಾಸದಲ್ಲಿ ಕಾಯ್ದಿರಿಸಿರುವ ರಸ್ತೆಗಳು, ಉದ್ಯಾನವನ ಮತ್ತು ನಾಗರೀಕ ಸೌಲಭ್ಯ ನಿವೇಶನಗಳನ್ನು ಯೋಜನಾ ಪ್ರಾಧಿಕಾರಕ್ಕೆ ಹಸ್ತಾಂತರಿಸಲು ಕ್ರಮ ಜರುಗಿಸತಕ್ಕದ್ದು.
9. ವಸತಿ ವಿನ್ಯಾಸ ನಕ್ಷೆಯಲ್ಲಿರುವಂತೆಯೇ ನಿವೇಶನಗಳನ್ನು, ರಸ್ತೆಗಳನ್ನು, ಉದ್ಯಾನವನ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಪ್ರದೇಶಗಳನ್ನು ಸ್ಥಳದಲ್ಲಿ ಯಥಾವತ್ತಾಗಿ ಅಳವಡಿಸುವುದು. ಉದ್ಯಾನವನ ಹಾಗೂ ನಾಗರೀಕ ಸೌಲಭ್ಯಕ್ಕಾಗಿ ಕಾಯ್ದಿರಿಸಿದ ಪ್ರದೇಶದ ಸುತ್ತಲೂ Chain linking Fencing ಮಾಡುವುದು. ಬಡಾವಣೆಯಲ್ಲಿ ಡಾಂಬರೀಕೃತ ರಸ್ತೆ, ಮಳೆ ನೀರಿನ ಚರಂಡಿ, ಕಲ್ವರ್ಟ್ಸ್, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ವಿದ್ಯುತ್. ಸಂಪರ್ಕ ವ್ಯವಸ್ಥೆಗಳನ್ನು ಕಲ್ಪಿಸತಕ್ಕದ್ದು ಹಾಗೂ ವಿನ್ಯಾಸದಲ್ಲಿ ಗುರುತಿಸಲಾಗಿರುವ ಸ್ಥಳದಲ್ಲಿಯೇ ಪ್ರಮಾಣೀಕೃತ ರೀತಿಯಲ್ಲಿ ಸೀವೇಜ್ ಟ್ರೀಟ್‌ಮೆಂಟ್ ಪ್ಲಾಂಟ್ (S.T.P) ಅನ್ನು ನಿರ್ಮಿಸುವುದು ಹಾಗೂ ರಸ್ತೆಯ ಎರಡು ಬದಿಗಳಲ್ಲೂ ಸಾಲು ಮರಗಳ ನೆಡುವಿಕೆ ಮುಂತಾದ ಎಲ್ಲಾ ಕಾಮಗಾರಿಗಳೊಂದಿಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸುವ ಬಗ್ಗೆ ಹಾಗೂ ಎಲ್ಲಾ ಕಾಮಗಾರಿಗಳನ್ನು ಮುಗಿಸಿರುವ ಬಗ್ಗೆ ಸಕ್ಷಮ ಪ್ರಾಧಿಕಾರ/ಸಂಸ್ಥೆ/ಇಲಾಖೆಗಳಿಂದ ಪ್ರಮಾಣ ಪತ್ರ/ ದೃಢೀಕರಣ ಪತ್ರ/ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ವಿನ್ಯಾಸದ ಅಂತಿಮ ಅನುಮೋದನೆ ಪಡೆಯತಕ್ಕದ್ದು.
10. ಈ ಅನುಮೋದಿತ ವಿನ್ಯಾಸ ಪ್ರದೇಶದಲ್ಲಿ ಹಾಲಿ ಇರುವ ಗಿಡ-ಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆಗಳಲ್ಲಿ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.
11. ಈ ವಿನ್ಯಾಸದ ಸುತ್ತಲೂ ಕಾಂಪೌಂಡ್ ನಿರ್ಮಿಸಿ, ಗೇಟ್ ಅನ್ನು ಅಳವಡಿಸಿ, ಗೇಟೆಡ್ ಕಮ್ಯೂನಿಟಿ ಎಂಬ ಹೆಸರಿನಲ್ಲಿ ನಿವೇಶನಗಳನ್ನು ಮಾರಾಟ ಮಾಡುವುದನ್ನು ನಿಷೇದಿಸಲಾಗಿದೆ. ಈ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆಗಳು, ಸಾರ್ವಜನಿಕ ರಸ್ತೆಗಳಾಗಿದ್ದು, ಇವುಗಳನ್ನು ಸಾರ್ವಜನಿಕ ಉಪಯೋಗಕ್ಕಾಗಿ ಮಾತ್ರ ಇರಿಸತಕ್ಕದ್ದು. ಈ ರಸ್ತೆಗಳಿಗೆ ಅಡ್ಡಲಾಗಿ ತಡೆಗೋಡೆಯನ್ನು ನಿರ್ಮಿಸತಕ್ಕದ್ದಲ್ಲ ಹಾಗೂ ಈ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಭಂದಿಸತಕ್ಕದ್ದಲ್ಲ.
12. ಪ್ರಸ್ತಾವಿತ ಜಮೀನುಗಳು ಯಾವುದೇ ಭೂ ಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
13. ಒಂದುವೇಳೆ ಸರ್ಕಾರವು ಪೂರ್ವಾನ್ವಯವಾಗುವಂತೆ ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಅರ್ಜಿದಾರರು ಪ್ರಾಧಿಕಾರಕ್ಕೆ ಪಾವತಿಸತಕ್ಕದ್ದು.
14. ಅನುಮೋದಿತ ವಿನ್ಯಾಸದಲ್ಲಿ ಮಳೆ ನೀರು ಸಂಗ್ರಹಣಾ ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸುವುದು ಹಾಗೂ ವಿನ್ಯಾಸದಲ್ಲಿ ಅಂತರ್‌ಜಲವೃಧ್ಧಿಗಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
15. ಕೊಳವೆ ಬಾವಿಗಳಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಛ ನ್ಯಾಯಾಲಯವು ರಿಟ್ ಅರ್ಜಿ (ಸಿವಿಲ್) ಸಂಖ್ಯೆ:36:2009ರಲ್ಲಿ ದಿನಾಂಕ:06.08.2010ರಂದು ನೀಡಿರುವ ತೀರ್ಪನ್ನು ಯಥಾವತ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಸಂಬಂಧಪಟ್ಟ ಪುರಸಭೆ/ಗ್ರಾಮ ಪಂಚಾಯಿತಿಗಳು ನಿಯಮಾವಳಿಗಳನ್ವಯ ಅಗತ್ಯ ಕ್ರಮ ಜರುಗಿಸತಕ್ಕದ್ದು.

16. ಸ್ಥಳೀಯ ಸಂಸ್ಥೆಗಳು ವಿಧಿಸುವ ಷರತ್ತುಗಳನ್ನು ಪಾಲಿಸತಕ್ಕದ್ದು.

17. ಈ ವಿನ್ಯಾಸ ನಕ್ಷೆಯ ಅನುಮೋದನೆಯ ಸಲುವಾಗಿ ಸಲ್ಲಿಸಲಾಗಿರುವ ಭೂ ಮಾಲೀಕತ್ವದ ದಾಖಲೆಗಳು, ಸರ್ವೆ ಸ್ಕೆಚ್ ಮತ್ತು ಇತರೆ ಯಾವುದೇ ದಾಖಲಾತಿಗಳು/ಮಾಹಿತಿಗಳು ತಪ್ಪು/ಸುಳ್ಳು/ಪೋರ್ಜರಿಯಾಗಿದ್ದಲ್ಲಿ ಅಥವಾ ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ವಿನ್ಯಾಸಕ್ಕೆ ನೀಡಿರುವ ಅಂಗೀಕಾರವು ಯಾವುದೇ ಪೂರ್ವ ಸೂಚನೆ ಇಲ್ಲದೆ ತಂತಾನೆ ರದ್ದುಗೊಳ್ಳುತ್ತದೆ.

18. ಈ ವಿನ್ಯಾಸದಲ್ಲಿ ಇರುವಂತಹ 'ಬಿ' ಖರಾಬು ಜಾಗಗಳು ಸರ್ಕಾರಕ್ಕೆ ಸೇರಿದವುಗಳಾಗಿದ್ದು, ಈ ಜಾಗಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಇವುಗಳನ್ನು ಅತಿಕ್ರಮಣ ಮಾಡತಕ್ಕದ್ದಲ್ಲ.

19. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ತಿದ್ದುಪಡಿ ಕಾಯ್ದೆ 2015ರ ವಿಧಿ 17(4)ರಂತೆ ಕ್ರಮ ಜರುಗಿಸಲಾಗುವುದು.

ಸಹಿ/–
ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ ಕಾರ್ಯದರ್ಶಿ,
ಕನಕಪುರ ಯೋಜನಾ ಪ್ರಾಧಿಕಾರ,
ಕನಕಪುರ.

**ಪ್ರತಿಯನ್ನು :**

1) **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ತರಳು ಗ್ರಾಮ ಪಂಚಾಯಿತಿ, ತರಳು** ಇವರಿಗೆ ಕಳುಹಿಸುತ್ತಾ ಸದರಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಶ್ನಿತ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ಯಾವುದೇ ನಿವೇಶನಗಳಿಗೆ ಖಾತಾ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
2) **ಉಪನೋಂದಣಾಧಿಕಾರಿಗಳು, ಜೆ.ಪಿ ನಗರ ಉಪನೋಂದಣಾ ಕಛೇರಿ, ಬೆಂಗಳೂರು ದಕ್ಷಿಣ ತಾಲ್ಲೂಕು** ಇವರಿಗೆ ಕಳುಹಿಸುತ್ತಾ ಸದರಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಶ್ನಿತ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ಯಾವುದೇ ನಿವೇಶನಗಳನ್ನು ನೋಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
3) ಅರ್ಜಿದಾರರಾದ **ಶ್ರೀ ಪುನೀತ್. ಆರ್ ಬಿನ್ ಎಲ್.ಇ ರಾಮಮೂರ್ತಿ ಇವರ** ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.
4) ಕಛೇರಿ ಪ್ರತಿ.

M.R.N 28/6/2022
ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ ಕಾರ್ಯದರ್ಶಿ,
ಕನಕಪುರ ಯೋಜನಾ ಪ್ರಾಧಿಕಾರ,
ಕನಕಪುರ.